ಅ) ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಹೆಚ್ಚುವರಿ ಕೊಠಡಿಗಳ ಅವಶ್ಯಕತೆಯನ್ನು ಸರ್ಕಾರ ಮನಗಂಡಿದೆಯೇ;

ಆ) ಹಾಗೆಯೇ ಈ ಶಾಲೆಗಳ ದುರಸ್ತಿಗೆ ಆದ್ಯತೆ ನೀಡಬೇಕಾಗಿರುವುದನ್ನು ಸರ್ಕಾರವು ಅರಿತಿದೆಯೇ;

ಇ) ಹಾಗಿದ್ದಲ್ಲಿ, ಈ ಎರಡೂ ಕಾರ್ಯ ಯೋಜನೆಗಳಿಗೆ ಸರ್ಕಾರವು ವಿಶೇಷವಾಗಿ ಆದ್ಯತೆಯ ಮೇರೆಗೆ ಪೂರೈಸಲು ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಮನಗಂಡಿದೆ.

ಆ) ಅರಿತಿದೆ.

ಇ) ರಾಜ್ಯದ ಆರ್ಥಿಕ ಸೌಲಭ್ಯ ಆದರಿಸಿ ಹಂತ ಹಂತವಾಗಿ ಈ ಎರಡೂ ಕಾರ್ಯ ಯೋಜನೆಗಳಿಗೆ ಸರ್ಕಾರವು ವಿಶೇಷ ಆದ್ಯತೆ ನೀಡಲಾಗುತ್ತಿದೆ.

ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಟ್ರಾಮಾ ಸೆಂಟರ್ ತೆರೆಯುವ ಬಗ್ಗೆ

2503(3357) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದ ಹೆದ್ದಾರಿಗಳಲ್ಲಿನ ಆಸ್ಪತ್ರೆಗಳಲ್ಲಿ "ಟ್ರಾಮಾ ಸೆಂಟರ್" ತೆರೆಯಲು ಉದ್ದೇಶಿಸಲಾಗಿದೆಯೇ?

ಆ) ಬೆಂಗಳೂರು - ಮೈಸೂರು ಹೆದ್ದಾರಿಯಲ್ಲಿನ ಜಿಲ್ಲಾ ಆಸ್ಪತ್ರೆ ಮಂಡ್ಯದಲ್ಲಿ ತುರ್ತಾಗಿ "ಟ್ರಾಮಾ ಸೆಂಟರ್" ತೆರೆಯುವ ಅವಶ್ಯಕತೆಯನ್ನು ಸರ್ಕಾರ ಮನಗಂಡಿದೆಯೇ?

ಇ) ಜಿಲ್ಲಾ ಆಸ್ಪತ್ರೆ ಮಂಡ್ಯದಲ್ಲಿ ತುರ್ತಾಗಿ "ಟ್ರಾಮಾ ಸೆಂಟರ್" ತೆರೆಯಲು ಈವರೆವಿಗೆ ಕೈಗೊಂಡಿರುವ ಕ್ರಮಗಳೇನು?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಹೌದು. ಕರ್ನಾಟಕ ಆರೋಗ್ಯ ಪದ್ಧತಿಗಳ ಅಭಿವೃದ್ಧಿ ಯೋಜನೆಯಡಿ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ಬರುವ ಒಟ್ಟು 44 ತುರ್ತು ಚಿಕಿತ್ಸಾ ಘಟಕ (ಟ್ರಾಮಾ ಸೆಂಟರ್) ತೆರೆಯಲು ಉದ್ದೇಶಿಸಲಾಗಿದ್ದು, ಅದು ಆಸ್ಪತ್ರೆ ವಿಸ್ತರಣಾ ಕಾಮಗಾರಿಯ ಒಂದು ಭಾಗವಾಗಿದೆ.

ಅ) ಹೌದು

ಇ) ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಟ್ರಾಮಾ ಸೆಂಟರ್ ತೆರೆಯಲು ಕಟ್ಟಡ ಕಾಮಗಾರಿಯನ್ನು ಪೂರ್ಣಗೊಳಿಸಿ ಜಿಲ್ಲಾ ಸರ್ಜನ್‌ಗೆ ಹಸ್ತಾಂತರಿಸಲಾಗಿದೆ.

ಸೇಡಂ ಕ್ಷೇತ್ರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿಯ ಕೊರತೆ.

2504 (2984) ಶ್ರೀ ಬಸವರೆಡ್ಡಿ ಮೊತಕಪಲ್ಲಿ (ಸೇಡಂ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ಕ್ಷೇತ್ರದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹಾಗೂ ಘಟಕಗಳಲ್ಲಿ ವೈದ್ಯಾಧಿಕಾರಿಗಳ ಹಾಗೂ ಇತರ ಸಿಬ್ಬಂದಿ ವರ್ಗದವರು ಇಲ್ಲದೇ ನಾಗರೀಕರಿಗೆ ಚಿಕಿತ್ಸೆಗಾಗಿ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸೇಡಂ ಕ್ಷೇತ್ರದ ಚಿತ್ತಾಪುರ ತಾಲ್ಲೂಕಿನ ಗ್ರಾಮಗಳು ಸೇರಿ ಸಂಖ್ಯೆ ಎಷ್ಟು ; ಇವುಗಳಲ್ಲಿರುವ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಯಾವ ಯಾವ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಹಾಗೂ ಹುದ್ದೆಗಳು ಖಾಲಿ ಇರುವ ಕೇಂದ್ರಗಳು ಯಾವುವು?

ಇ) ಈ ಕ್ಷೇತ್ರದವರು ಆರೋಗ್ಯ ಚಿಕಿತ್ಸೆಗಾಗಿ ಪರದಾಡುತ್ತಿರುವವರನ್ನು ತಪ್ಪಿಸಲು ಎಲ್ಲಾ ಹುದ್ದೆಗಳನ್ನು ತುಂಬಿ ಎಂದಿನಿಂದ ಅನುಕೂಲ ಮಾಡಿಕೊಡಲಾಗುವುದು?

ಶ್ರೀ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಆರೋಗ್ಯ ಕೇಂದ್ರಗಳಿಗೆ 12 ವೈದ್ಯರ ಹುದ್ದೆಗಳು ಮಂಜೂರಾಗಿದ್ದು 10 ಜನ ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ. 2 ಹುದ್ದೆಗಳು ಖಾಲಿ ಇವೆ. ಇದರಿಂದ ನಾಗರೀಕರಿಗೆ ಚಿಕಿತ್ಸೆಗೆ ಅನಾನುಕೂಲವಾಗುವ ಸಂಭವವಿರುವುದಿಲ್ಲ.

ಆ) ಸೇಡಂ ಕ್ಷೇತ್ರದ ಚಿತ್ತಾಪುರ ತಾಲ್ಲೂಕಿನ ಗ್ರಾಮಗಳು ಸೇರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು 9 ಮತ್ತು ಪ್ರಾಥಮಿಕ ಆರೋಗ್ಯ ಘಟಕ ಒಂದು ಇವೆ. 8 ಕೇಂದ್ರಗಳಲ್ಲಿ ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ. ಒಂದು ಕೇಂದ್ರ ಮತ್ತು ಒಂದು ಘಟಕದಲ್ಲಿ ಹುದ್ದೆ ಖಾಲಿ ಇವೆ.